# ವಿಧಾನಸಭೆ ಸಂಸದೀಯ ಪ್ರಜಾಪ್ರಭುತ್ವದ ದೇಗುಲ

## ನನ್ನಂಥವರು ಶಾಸಕರಾಗಲು ಮುಖ್ಯಮಂತ್ರಿ ಆಗಲು ಡಾ.ಅಂಬೇಡ್ಕರ್ ಸಂವಿಧಾನ ಕಾರಣ। ಸಂವಿಧಾನದ ಓದು ಅತ್ಯಗತ್ಯ

### 16ನೇ ವಿಧಾನಸಭೆಗೆ ನೂತನವಾಗಿ ಆಯ್ಕೆಯಾದ ಶಾಸಕರ ತರಬೇತಿ ಶಿಬಿರಕ್ಕೆ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ

ಉದಯಕಾಲ ನ್ಯೂಸ್

**ಬೆಂಗಳೂರು:** ಅಧಿವೇಶನದಲ್ಲಿ ಶಾಸಕರು ಕಡ್ಡಾಯವಾಗಿ ಹಾಜರಿರಬೇಕು. ಆದಷ್ಟು ಗೈರಾಗುವುದನ್ನು ಕಡಿಮೆ ಮಾಡಿ ಸದನದ ಕಲಾಪಗಳಲ್ಲಿ ಸಕ್ರಿಯರಾಗಿ ಪಾಲ್ಗೊಳ್ಳಿ ಎಂದು ಸಿಎಂ ಸಿದ್ದರಾಮಯ್ಯ ಸಲಹೆ ನೀಡಿದರು.

16ನೇ ವಿಧಾನಸಭೆಗೆ ನೂತನವಾಗಿ ಆಯ್ಕೆಯಾದ ಶಾಸಕರ ತರಬೇತಿ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರತಿಯೊಬ್ಬ ಶಾಸಕರು ಸದನಕ್ಕೆ ತಪ್ಪದೇ ಹಾಜರಾಗುವ ಮೂಲಕ ಮತ್ತೊಬ್ಬರಿಗೆ ಸ್ಫೂರ್ತಿಯಾಗಬೇಕು. ಅಧಿವೇಶನದಲ್ಲಿ ಪಾಲ್ಗೊಂಡು ಕ್ಷೇತ್ರದ ಸಮಸ್ಯೆಗಳನ್ನು ಪ್ರಸ್ತಾಪಿಸಿ ಸರ್ಕಾರದಿಂದ ಪರಿಹಾರ ಕಂಡುಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ವಿಧಾನಸಭೆ ಸಂಸದೀಯ ಪ್ರಜಾಪ್ರಭುತ್ವದ ದೇಗುಲ. ಇಲ್ಲಿ ಜನರ ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ಪ್ರಸ್ತಾಪಿಸಿ ಪರಿಹಾರ ಪಡೆದುಕೊಳ್ಳುವ ಮನಸ್ಥಿತಿಯನ್ನು ಪ್ರತಿಯೊಬ್ಬ ಶಾಸಕ ಬೆಳೆಸಿಕೊಳ್ಳಬೇಕು. ಯಾರು ಸಂವಿಧಾನವನ್ನು ಓದಿ ಅರ್ಥ ಮಾಡಿಕೊಳ್ಳುವುದಿಲ್ಲವೋ ಅವರು ಉತ್ತಮ ಶಾಸಕರಾಗಲು, ಸಂಸದರಾಗಲು ಸಾಧ್ಯವಿಲ್ಲ. ಮೊದಲು ಸಂವಿಧಾನ ಓದಿ ಅದರ ಮೂಲಭೂತ ತತ್ವ ಮತ್ತು ಉದ್ದೇಶ ಅರಿತುಕೊಳ್ಳಬೇಕು ಎಂದು ತಿಳಿಸಿದರು.



ಸದನದ ನಿಯಮಾವಳಿಗಳನ್ನು ಸರಿಯಾಗಿ ಓದಿ ಅರ್ಥ ಮಾಡಿಕೊಂಡರೆ ಜನರ ಸಮಸ್ಯೆಗಳನ್ನು ನಿಯಮಬದ್ಧವಾಗಿ ಸದನದ ಮುಂದೆ ಮಂಡಿಸಬಹುದು. ಸಂವಿಧಾನಕ್ಕೆ ವಿರುದ್ಧವಾದ ಕಾನೂನು-ಕಾಯ್ದೆಗಳನ್ನು ಮಾಡಲು ಸಾಧ್ಯವಿಲ್ಲ. ಸಂವಿಧಾನದ ಓದು ಅತ್ಯಗತ್ಯ. ಶಾಸಕರು, ಸಂಸದರು ಬಜೆಟ್ ಅಂದರೆ ಏನೆಂದು ಅರ್ಥ ಮಾಡಿಕೊಳ್ಳಬೇಕು. 12ನೇ ಶತಮಾನದಲ್ಲಿ ಕಾಯಕಯೋಗಿ ಬಸವಣ್ಣನವರು ಬಜೆಟ್ ಬಗ್ಗೆ ಹೇಳಿದ್ದಾರೆ. ಕಾಯಕ ಅಂದರೆ ಉತ್ಪಾದನೆ, ದಾಸೋಹ ಅಂದರೆ ಹಂಚಿಕೆ. ಬಜೆಟ್ ಅಂದರೆ ಇಷ್ಟೆ, ಎಲ್ಲಿಂದ ಉತ್ಪಾದನೆ ಬರುತ್ತದೆ ಅದನ್ನು ಸಮಾಜದ ಯಾರಿಗೆ ಹಂಚುತ್ತೇವೆ ಎನ್ನುವುದೇ ಬಜೆಟ್ ನ ಮೌಲ್ಯ ಎಂದು ಪ್ರತಿಪಾದಿಸಿದರು.

ನಾನು, ನನ್ನಂಥವರು ಶಾಸಕರಾಗಲು, ಮುಖ್ಯಮಂತ್ರಿ ಆಗಲು ಡಾ.ಅಂಬೇಡ್ಕರ್ ಅವರು ನೀಡಿದ ಸಂವಿಧಾನ ಕಾರಣ. ಸಂವಿಧಾನ ಇಲ್ಲದಿದ್ದರೆ ಸಿ.ಟಿ.ರವಿ, ಕೆ.ಎಸ್. ಈಶ್ವರಪ್ಪ, ನಾನು ಸಹ ಎಲ್ಲೋ ಕುರಿ, ಹಸು ಕಾಯುತ್ತಾ ಇರಬೇಕಾಗಿತ್ತು.

ಪುಟ 07